ಕಾಯ್ದೆ 1948ರ ಅಡಿಯಲ್ಲಿ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತಿದೆ. ಕಾರ್ಮಿಕರ ಹಿತ ಕಾಪಾಡುವ ದೃಷ್ಟಿಯಿಂದ ಸರ್ಕಾರ ಕಳೆದ ಎರಡೂವರೆ ವರ್ಷಗಳಿಂದ **ಮಹಿಳಾ ಹಕ್ಕು ತರಬೇತಿ ಮತ್ತು ಸುರಕ್ಷತಾ ಉಸ್ತುವಾರಿ ಕೇಂದ್ರ** ಎಂಬ ಯೋಜನೆ ಅಡಿ ಹಲವಾರು ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ಉದ್ಯೋಗ ರಕ್ಷಣೆ ನೀಡಲು ಈಗಾಗಲೇ ಹಲವಾರು ಕಾರ್ಮಿಕರ ಕಾನೂನುಗಳು ಜಾರಿಯಲ್ಲಿರುತ್ತವೆ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳು ಸಮರ್ಥನೀಯವಾಗಿ ಜಾರಿಗೆ ತರುವಲ್ಲಿ ಕಾರ್ಯನಿರತವಾಗಿವೆ. ಮೇಲಿನ ವಿಷಯಗಳಲ್ಲಿ ದೂರುಗಳು ಸ್ವೀಕೃತವಾದಲ್ಲಿ ಅವುಗಳನ್ನು ನಿವಾರಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಅನಾಥ ಹಾಗೂ ವೃದ್ಧಾಶ್ರಮಗಳ ಸುಧಾರಣೆ ಬಗ್ಗೆ

426 (734) ಶ್ರೀ ಮುನಿರಾಜು. ಎಸ್ (ದಾಸರಹಳ್ಳಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅನಾಥ ವೃದ್ಧರಿಗೆ ಬೆಂಗಳೂರು ನಗರದಲ್ಲಿ ಸರ್ಕಾರದ ವತಿಯಿಂದ ನಡೆಸಲಾಗುತ್ತಿರುವ ವೃದ್ಧಾಶ್ರಮಗಳ ಒಟ್ಟು ಸಂಖ್ಯೆ ಎಷ್ಟು;

ಆ) ಪ್ರತಿ ವೃದ್ಧಾಶ್ರಮದಲ್ಲಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಹಗೂ ವೃದ್ಧಾಶ್ರಮಕ್ಕೆ ತುಂಬಿಕೊಳ್ಳಬಹುದಾದ ಫಲಾನುಭವಿಗಳ ಸಂಖ್ಯೆ ಎಷ್ಟು;

ಇ) ಬೆಂಗಳೂರು ನಗರ ಹಾಗೂ ಕರ್ನಾಟಕದಾದ್ಯಂತ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ನಡೆಸುತ್ತಿರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು;

ಈ) ಸರ್ಕಾರದ ವತಿಯಿಂದ ಕರ್ನಾಟಕ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ವೃದ್ಧಾಶ್ರಮಗಳನ್ನು ಪ್ರಾರಂಭಿಸಲಾಗುತ್ತಿದೆಯೇ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ರಾಜ್ಯ ಸರ್ಕಾರದ ಅನುದಾನದಿಂದ ಎರಡು ಹಾಗೂ ಕೇಂದ್ರ ಸರ್ಕಾರದ ಅನುದಾನದಿಂದ 8 ವೃದ್ಧಾಶ್ರಮಗಳನ್ನು ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳಿಂದ ನಡೆಸಲಾಗುತ್ತಿದೆ.

ಆ) ಪ್ರತಿ ವೃದ್ಧಾಶ್ರಮದಲ್ಲಿ ಒಟ್ಟು ಕನಿಷ್ಠ 25 ಫಲಾನುಭವಿಗಳು ಇರುತ್ತಾರೆ. ಪ್ರತಿ ವೃದ್ಧಾಶ್ರಮದಲ್ಲಿ ಕನಿಷ್ಠ 25 ಫಲಾನುಭವಿಗಳನ್ನು ತುಂಬಿಕೊಳ್ಳಲು ಅವಕಾಶವಿದೆ.

ಇ) ಬೆಂಗಳೂರು ನಗರ ಜಿಲ್ಲೆಯು ಸೇರಿದಂತೆ ಕರ್ನಾಟಕ ರಾಜ್ಯಾದ್ಯಂತ 27 ರಾಜ್ಯ ಅನುದಾನದಿಂದ ಹಾಗೂ 54 ಕೇಂದ್ರ ಅನುದಾನ ದಿಂದ ಒಟ್ಟು 81 ವೃದ್ಧಾಶ್ರಮಗಳು ಸ್ವಯಂ ಸೇವಾ ಸಂಸ್ಥೆಗಳಿಂದ ನಡೆಯುತ್ತಿದೆ.

ಈ) ಇಲ್ಲ.

ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕೊಳವೆ ಬಾವಿಗಳ ವಿವರ

427 (385) ಶ್ರೀ ಮುನಿಯಪ್ಪ.ವಿ. (ಶಿಡ್ಲಘಟ್ಟ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳಿಗೆ 2009–10 ನೇ ಸಾಲಿನಲ್ಲಿ ಮಂಜೂರು ಆಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು, ತಾಲ್ಲೂಕುವಾರು ವಿವರ ನೀಡುವುದು;

ಆ) ಪ್ರತಿ ಕೊಳವೆ ಬಾವಿಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ ಅಂದಾಜು ವೆಚ್ಚಕ್ಕೆ ಅನುಗುಣವಾಗಿ ಮಂಜೂರಾತಿ ಆಗಿದೆಯೇ;

ಇ) ಕೊಳವೆ ಬಾವಿಗಳ ಅಂದಾಜು ವೆಚ್ಚದ ಹಣವನ್ನು ಹೆಚ್ಚಿಸಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಒಟ್ಟು 14,423 ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿರುತ್ತದೆ. (ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ)

ಆ) ಪ್ರತಿ ಕೊಳವೆ ಬಾವಿಗೆ ರೂ.86,000/– ಸಹಾಯಧನ ಮತ್ತು ರೂ.14,000/– ಅವಧಿ ಸಾಲ ನೀಡಲಾಗುತ್ತಿದೆ.